203 (575) ಶ್ರೀ. ಐವಾನ್ ಸಿಲ್ವಿ,

ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ

ಅ) ಕರ್ನಾಟಕ ರಾಜ್ಯದಲ್ಲಿ ಮಹಿಳೆಯರಿಗಾಗಿಯೇ ಯಾವುದಾದರೂ ಅಭಿವೃದ್ಧಿ ನಿಗಮವನ್ನು ಪ್ರಾರಂಭಿಸಲು ಪ್ರಸ್ತಾವನೆ ಇದಯೇ ;

ಆ) ಇಲ್ಲವಾದಲ್ಲಿ ರಾಜ್ಯದಲ್ಲಿ ಮಹಿಳೆಯರಿಗೆ ನೆರವು ನೀಡಲು ಮಹಿಳಾ ಅಭಿವೃದ್ಧಿ ನಿಗಮವನ್ನು ಸ್ಥಾಪಿಸಲು ಯಾವ ರೀತಿ ಕ್ರಮ ಕೈಗೊಳ್ಳಲಾಗಿದೆ.

ಇ) ಭಾರತ ದೇಶದಲ್ಲಿ ರಾಜ್ಯಗಳ ಉಸ್ತುವಾರಿಯಲ್ಲಿ ಯಾವುದಾದರು ರಾಜ್ಯ ಮಹಿಳಾ ಅಭಿವೃದ್ಧಿ ನಿಗಮವು ಸ್ಥಾಪಿಸಲಾಗಿದೆಯೆ; ಇಲ್ಲವಾದಲ್ಲಿ ಮಹಿಳೆಯರ ಸಭಲೀಕರಣಕ್ಕಾಗಿ ಮಾದರಿಯಾಗುವಂತೆ ಸರ್ಕಾರವು ಇಂತಹ ಒಂದು ನಿಗಮವನ್ನು ಸ್ಥಾಪಿಸಲು ಸರ್ಕಾರ ಉದ್ದೇಶಿಸಿದೆಯೆ?

ಶ್ರೀ ಹೆಚ್ ಕೆ ಕುಮಾರ ಸ್ವಾಮಿ

ಅ) ಕರ್ನಾಟಕ ಸರ್ಕಾರವು ಮಹಿಳೆಯರ ಸಾಮಾಜಿಕ ಹಾಗೂ ಆರ್ಥಿಕ ಸಬಲೀಕರಣಕ್ಕಾಗಿ ಈಗಾಗಲೇ 1987 ರಲ್ಲಿಯೇ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮವನ್ನು ಸ್ಥಾಪಿಸಿದೆ. ಈ ನಿಗಮವು ಕರ್ನಾಟಕ ಸರ್ಕಾರದ ಒಂದು ಉದ್ದಿಮೆ ಯಾಗಿದ್ದು, ಕಂಪನ ಕಾಯ್ದೆ 1956ರ ಅಡಿಯಲ್ಲಿ ನೊಂದಣಿಯಾಗಿರುತ್ತದೆ. ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮವು ಮಹಿಳೆಯರ ಸಬಲೀಕರಣಕ್ಕಾಗಿ ಕೇಂದ್ರ ಸರ್ಕಾರದ, ರಾಜ್ಯ ಸರ್ಕಾರದ ವಿವಿಧ ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿದೆ.

ಆ) ಉದ್ಭವಿಸುವುದಿಲ್ಲ

ಇ) ಭಾರತದಲ್ಲಿ ಈಗಾಗಲೇ ಹಲವಾರು ರಾಜ್ಯಗಳಲ್ಲಿ ಮಹಿಳಾ ಅಭಿವೃದ್ಧಿ ನಿಗಮಗಳು ಸ್ಥಾಪಿತಗೊಂಡು ಕಾರ್ಯನಿರ್ವಹಿಸುತ್ತಿವೆ. ಕರ್ನಾಟಕ ರಾಜ್ಯದಲ್ಲಿ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮವು 1987ರಲ್ಲಿ ಸ್ಥಾಪಿತಗೊಂಡಿದ್ದು, ಮಹಿಳೆಯರ ಸಾಮಾಜಿಕ ಹಾಗೂ ಆರ್ಥಿಕ ಸಬಲೀಕರಣಕ್ಕಾಗಿ ಕಾರ್ಯ ನಿರ್ವಹಿಸುತ್ತಿದೆ.

204:(22) ಶ್ರೀ ಜಯಪ್ರಕಾಶ್ ಹೆಗ್ಡೆ.ಕೆ (ಬ್ರಹ್ಮಾವರ)

ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ಕೃಷಿ ಬಿತ್ತನೆ ಬೀಜಗಳನ್ನು ಗ್ರಾಮಾಂತರ ಪ್ರದೇಶದ ಸಹಕಾರ ಸಂಘಗಳ ಮೂಲಕ ರೈತರಿಗೆ ವಿತರಿಸುವ ಉದ್ದೇಶ ಸರ್ಕಾರಕ್ಕಿದೆಯೇ ;

ಆ) ಹಾಗಿದ್ದಲ್ಲಿ, ವಿತರಣೆಯಲ್ಲಿ ವಿಳಂಬವಾಗಲು ಕಾರಣವೇನು;

ಇ) ಇಲ್ಲವಾದಲ್ಲಿ, ಸದರಿ ಸಹಕಾರ ಸಂಘಗಳ ಮೂಲಕ ಬೀಜ ವಿತರಿಸುವ ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ಬಂಡೆಪ್ಪ ಕಾಶಂಪೂರ

ಅ),ಆ)&ಇ) ಬಿತ್ತನೆ ಬೀಜಗಳನ್ನು ಈಗಾಗಲೇ ಸಹಕಾರಿ ಸಂಘಗಳ ಮೂಲಕವೂ ಸಹ ವಿತರಣೆ ಮಾಡುಲಾಗುತ್ತಿರುವುದರಿಂದ ವಿಳಂಬದ ಪ್ರಶ್ನೆ ಉದ್ಭವಿಸುವುದಿಲ್ಲ.